ಡಾ.ವೈ.ಎ.ನಾರಾಯಣಸ್ವಾಮಿ ವಿಧಾನ ಪರಿಷತ್ತು ಸದಸ್ಯರು ಇವರು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಉಪಮುಖ್ಯಮಂತ್ರಿಗಳು, ಲೋಕೋಪಯೋಗಿ ಹಾಗೂ ಸಮಾಜ ಕಲ್ಯಾಣ ಸಚಿವರ ಹೇಳಿಕೆ:-

ವಿಷಯ: ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ನಡೆಯುವ ಶಾಲಾ ಕಾಲೇಜುಗಳಲ್ಲಿ ಅತ್ಯಂತ ಉತ್ತಮವಾದ ಫಲಿತಾಂಶ ಬರುತ್ತಿದೆ. ಆದರೆ, ಈ ಸಂಸ್ಥೆಯಲ್ಲಿ ದುಡಿಯುತ್ತಿರುವ ಪ್ರಾಂಶುಪಾಲರು, ಬೋಧಕರು, ಮೇಲ್ವಿಚಾರಕರುಗಳು ಅನೇಕ ಸರ್ಕಾರಿ ಸೌಲಭ್ಯಗಳಿಂದ ವಂಚಿತರಾಗಿದ್ದಾರೆ. ಹಾಗೂ ನಾನಾ ಹಂತದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಇಲ್ಲಿ ಕೆಲಸ ನಿರ್ವಹಿಸುತ್ತಿರುತ್ತಾರೆ. ಇವರಿಗೆ ಸೇವಾ ಭದ್ರತೆ ಹಾಗೂ ಸೌಲಭ್ಯಗಳನ್ನು ನೀಡುವುದರಲ್ಲಿ ಸರ್ಕಾರವು ವಿಫಲವಾಗಿರುವ ಬಗ್ಗೆ.

****

ಉತ್ತರ:- ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಡಿ ಬರುವ ವಸತಿ ಶಾಲೆ/ ಕಾಲೇಜುಗಳ ಖಾಯಂ ಸಿಬ್ಬಂದಿಗಳಿಗೆ ಸರ್ಕಾರಿ ಶಾಲೆಗಳಲ್ಲಿರುವ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ನೀಡಲಾಗುತ್ತಿರುವ ವೇತನ ಶ್ರೇಣಿ, ವಾರ್ಷಿಕ ವೇತನ ಬಡ್ತಿ, ನೂತನ ಪಿಂಚಣಿ ಯೋಜನೆ, ವೈದ್ಯಕೀಯ ವೆಚ್ಚ ಮರುಪಾವತಿ, ಗಳಿಕೆ ರಜಾ ನಗದೀಕರಣ, ಅನುಕಂಪ ಆಧಾರದ ಮೇಲೆ ನೇಮಕಾತಿ ಒದಗಿಸಲಾಗುತ್ತಿದೆ.

ಸರ್ಕಾರಿ ನೌಕರರಿಗೆ ಅನುಷ್ಠಾನಗೊಳಿಸಿರುವ ನಗದು ರಹಿತ ವೈದ್ಯಕೀಯ ಚಿಕಿತ್ಸೆ ಒದಗಿಸುವ ಜ್ಯೋತಿ ಸಂಜೀವಿನಿ ಯೋಜನೆ, ಗುಂಪು ವಿಮಾ ಯೋಜನೆ ಮತ್ತು ನಿವೃತ್ತಿ/ಮರಣ ಉಪದಾನ ಹಾಗೂ ಕುಟುಂಬ ಪಿಂಚಣಿ ಯೋಜನೆ (DCRG) ಯೋಜನೆಗಳನ್ನು ಸಂಘದ ಖಾಯಂ ಸಿಬ್ಬಂದಿಗಳಿಗೆ ವಿಸ್ತರಿಸುವ ಬಗ್ಗೆ ಪರಿಶೀಲಿಸಲಾಗುತ್ತಿದೆ.

(ಗೋವಿಂದ ಎಂ. ಕಾರಜೋಳ)
ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ ಹಾಗೂ
ಸಮಾಜ ಕಲ್ಯಾಣ ಇಲಾಖಾ ಸಚಿವರು.

ಕಡತ ಸಂಖ್ಯೆ: ಸಕಇ 315 ಮೊದೇಶಾ 2020